# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 216(1535)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಯು. ಬಿ. ವೆಂಕಟೇಶ್(ನಾಮನಿರ್ದೇಶನ ಹೊಂದಿದವರು )

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮುಖ್ಯಮಂತ್ರಿಗಳು

ವಿಷಯ : ಬೆಂಗಳೂರು ನಗರದ ರಿಂಗ್ ರಸ್ತೆಯ ಒತ್ತುವರಿ ಕುರಿತು

(ಅ) ಬೆಂಗಳೂರು ನಗರದ ರಿಂಗ್ ರಸ್ತೆಯ ಹೊಸಕೆರೆಹಳ್ಳಿ ಪಿ.ಇ.ಎಸ್. ಯುನಿರ್ವಸಿಟಿ ಜಂಕ್ಷನ್‌ನಿಂದ ನಾಯಂಡಹಳ್ಳಿಗೆ ಹೋಗುವ ರಸ್ತೆಯ ಇಕ್ಕೆಲಗಳಲ್ಲಿರುವ ಸರ್ವೀಸ್ ರಸ್ತೆಯೂ ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ಬೆಂಗಳೂರು ನಗರದ ಯಾವ ಯಾವ ಬಡಾವಣೆಗಳಲ್ಲಿರುವ ರಸ್ತೆಗಳು ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ ಬಳಕೆಯಾಗುತ್ತಿವೆ; ಇಂತಹ ರಸ್ತೆಗಳ ಸಂಖ್ಯೆ ಎಷ್ಟು; ಇವುಗಳನ್ನು ತೆರುವುಗೊಳಿಸಿ ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)